ಕರ್ನಾಟಕ ಸರ್ಕಾರ

ಸಂಖ್ಯೆ:ಹಿಂವಕಇ/ವಿವೇ/ಸಿಆರ್-14/2018-19

ಆಯುಕ್ತರ ಕಛೇರಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ನಂ.16/ಡಿ, 3ನೇ ಮಹಡಿ, ಡಿ.ದೇವರಾಜ ಅರಸುಭವನ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ ವಸಂತನಗರ,
ಬೆಂಗಳೂರು-52, ದಿನಾಂಕ: 27-08-2018.

# ಪ್ರಕಟಣೆ

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : **30-09-2018**
- ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾದ ವೆಬ್‌ಸೈಟ್ ವಿಳಾಸ : **www. ssp.karnataka.gov.in**
- ಅರ್ಹತೆ : ಒಂದನೇ ತರಗತಿಯಿಂದ 10 ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹವಿರುತ್ತಾರೆ.

### ವಿದ್ಯಾರ್ಥಿ ವೇತನ ಸೌಲಭ್ಯದ ವಿವರ

**(A)** ಕೇಂದ್ರ ಪುರಸ್ಕೃತ ವಿದ್ಯಾರ್ಥಿ ವೇತನ ದರಗಳು : (ರೂ.ಗಳಲ್ಲಿ)

| ತರಗತಿ | ಬಾಲಕ/ಬಾಲಕಿ (10 ತಿಂಗಳಿಗೆ) | ಅಡ್‌ಹಾಕ್ ಗ್ರಾಂಟ್ | ಒಟ್ಟು |
|---|---|---|---|
| ತರಗತಿ 1 ರಿಂದ 10 | 1000/- | 500/- | 1500/- |

**(B)** ರಾಜ್ಯ ವಿದ್ಯಾರ್ಥಿ ವೇತನ ದರಗಳು : (ರೂ.ಗಳಲ್ಲಿ)

| ತರಗತಿ | ಬಾಲಕ/ಬಾಲಕಿ (10 ತಿಂಗಳಿಗೆ) | ಅಡ್‌ಹಾಕ್ ಗ್ರಾಂಟ್ | ಒಟ್ಟು |
|---|---|---|---|
| ತರಗತಿ 1 ರಿಂದ 5 | 250/- | 500/- | 750/- |
| ತರಗತಿ 6 ರಿಂದ 8 | 400/- | 500/- | 900/- |
| ತರಗತಿ 9 ರಿಂದ 10 | 500/- | 500/- | 1000/- |

### ಅರ್ಜಿ ಸಲ್ಲಿಸಲು ಅಗತ್ಯವಿರುವ ಮಾಹಿತಿ/ದಾಖಲೆ

- ✓ ಶಾಲೆಯಲ್ಲಿ ಪ್ರವೇಶ ಪಡೆದಿರುವ ಬಗ್ಗೆ ಸ್ಯಾಟ್ಸ್-ಐಡಿ (SATS-ID) (ಸ್ಯಾಟ್ಸ್-ಐಡಿ ತಿಳಿಯಲು ವೆಬ್ ವಿಳಾಸ: http://sts.karnataka.gov.in)
- ✓ ವಿದ್ಯಾರ್ಥಿಯ ಆಧಾರ್ ಸಂಖ್ಯೆ
- ✓ ಪೋಷಕರ ಆಧಾರ್ ಸಂಖ್ಯೆ
- ✓ ಜಾತಿ ಪ್ರಮಾಣ ಪತ್ರದ ಆರ್.ಡಿ. ಸಂಖ್ಯೆ
- ✓ ಆದಾಯ ಪ್ರಮಾಣ ಪತ್ರದ ಆರ್.ಡಿ. ಸಂಖ್ಯೆ
- ✓ ಸರ್ಕಾರಿ ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ ಪಡೆದಿದ್ದಲ್ಲಿ, ವಿದ್ಯಾರ್ಥಿ ನಿಲಯ ಪ್ರವೇಶ ಸಂಖ್ಯೆ (ಸಂಬಂಧಿಸಿದ ಇಲಾಖೆಯಿಂದ ಪಡೆದಿದ್ದು)
- ✓ ಹಿಂದಿನ ಸಾಲಿನಲ್ಲಿ ವಿದ್ಯಾರ್ಥಿ ವೇತನ ಪಡೆದಿದ್ದಲ್ಲಿ ಹಿಂದಿನ ಸಾಲಿನ ಅರ್ಜಿ ಸಂಖ್ಯೆ (ಸಂಬಂಧಿಸಿದ ಇಲಾಖೆಯಿಂದ ಪಡೆದಿದ್ದು)
- ✓ ಆಧಾರ್ ಸಂಖ್ಯೆ ಇಲ್ಲದಿದ್ದಲ್ಲಿ, ಆಧಾರ್ ನೋಂದಣಿ ಮಾಡಿಸಿದ ಇ.ಐ.ಡಿ ಸಂಖ್ಯೆ, ಬ್ಯಾಂಕ್ ಖಾತೆ ಸಂಖ್ಯೆ, ಐ.ಎಫ್.ಎಸ್.ಸಿ ಸಂಖ್ಯೆ, ಬ್ಯಾಂಕಿನ ವಿಳಾಸ
- ✓ ಪೋಷಕರ ಆಧಾರ್ ನಂಬರ್‌ಗೆ ಲಿಂಕ್ ಮಾಡಿರುವ ಮೊಬೈಲ್ ನಂ ಹಾಗೂ ಭೌತಿಕ ಅನುಮತಿ ಪತ್ರ

### ಅರ್ಜಿ ಸಲ್ಲಿಸಲು ಬೇಕಾದ ಅರ್ಹತೆಗಳು:

1. ಕುಟುಂಬದ ವಾರ್ಷಿಕ ಆದಾಯ ಮಿತಿ :
   - ➢ ಕೇಂದ್ರ ಪುರಸ್ಕೃತ ವಿದ್ಯಾರ್ಥಿ ವೇತನ : ರೂ. 2.50 ಲಕ್ಷ /ವಾರ್ಷಿಕ ಎಲ್ಲಾ ಪ್ರವರ್ಗಗಳಿಗೆ
   - ➢ ರಾಜ್ಯ ಸರ್ಕಾರದ ವಿದ್ಯಾರ್ಥಿ ವೇತನ : ರೂ. 1.00 ಲಕ್ಷ/ವಾರ್ಷಿಕ ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ಮಾತ್ರ
     ರೂ. 44,500/- ವಾರ್ಷಿಕ ಪ್ರವರ್ಗ-2ಎ, 3ಎ, 3ಬಿ, ಇತರೆ ಹಿಂದುಳಿದ ವರ್ಗಗಳಿಗೆ
2. ಫಲಾನುಭವಿಯ ಜಾತಿ :
   - ➢ ರಾಜ್ಯ ಸರ್ಕಾರವು ಅಧಿಸೂಚಿಸಿರುವ ಪ್ರವರ್ಗ-1, 2ಎ, 3ಎ ಮತ್ತು 3ಬಿ ಹಾಗೂ ಕೇಂದ್ರ ಸರ್ಕಾರವು ಅಧಿಸೂಚಿಸಿರುವ ಇತರೆ ಹಿಂದುಳಿದ ವರ್ಗಗಳು (ಪ್ರವರ್ಗ-1, 2ಎ, 2ಬಿ, ಮತ್ತು 3ಬಿ ಗಳಲ್ಲಿ ಬರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಈ ಸೌಲಭ್ಯಕ್ಕೆ ಅರ್ಹರಾಗುವುದಿಲ್ಲ)
3. ಆದಾಯ ಮತ್ತು ಮೆರಿಟ್ ಆಧಾರದಲ್ಲಿ ಮಂಜೂರಾತಿ :
   - ➢ ಕೇಂದ್ರ ಪುರಸ್ಕೃತ ಅನುದಾನವನ್ನು ಅತ್ಯಂತ ಕಡಿಮೆ ಆದಾಯ ಮತ್ತು ಮೆರಿಟ್ ಇರುವ ವಿದ್ಯಾರ್ಥಿಗಳಿಗೆ ಅನುದಾನದ ಲಭ್ಯತೆಗೊಳಪಟ್ಟು ಮಂಜೂರು ಮಾಡಲಾಗುವುದು.
   - ➢ ತದ ನಂತರ ಇನ್ನುಳಿದ ವಿದ್ಯಾರ್ಥಿಗಳಿಗೆ ಆದಾಯ ಮತ್ತು ಮೆರಿಟ್ ಆಧಾರದ ಮೇಲೆ ರಾಜ್ಯ ವಿದ್ಯಾರ್ಥಿ ವೇತನ ಮಂಜೂರು ಮಾಡಲಾಗುವುದು.

ಹೆಚ್ಚಿನ ವಿವರಗಳಿಗೆ ಸಂಪರ್ಕಿಸಿ: ಸಂಬಂಧಪಟ್ಟ ತಾಲ್ಲೂಕು ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿ /ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ/ ***www.backwardclasses.kar.nic.in***

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.